ಸುದ್ದಿ ಸಿಂಚನ

ಜನಪ್ರತಿನಿಧಿಗಳು ಕನ್ನಡಿಗರ ಪರ ದನಿಯಾಗಿ: ಸಂಜೀವ್

ದೊಡ್ಡಬಳ್ಳಾಪುರ: ನಗರಸಭೆ ಹಾಗೂ ದರ್ಗಾಜೋಗಿಹಳ್ಳಿ ಗ್ರಾಮ ಪಂಚಾಯಿತಿಗಳಲ್ಲಿ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳನ್ನು ಪಡೆದಿರುವ ಕನ್ನಡಪರ ಹೋರಾಟಗಾರರ ಹಿನ್ನೆಲೆಯ ಮುಖಂಡರಿಗೆ ತಾಲೂಕು ಶಿವರಾಜ್ ಕುಮಾರ್ ಕನ್ನಡ ಸೇನಾ ಸಮಿತಿ ನೇತೃತ್ವದಲ್ಲಿ ಅಭಿನಂದಿಸಲಾಯಿತು. ಪುರಭವನದಲ್ಲಿ ನಗರಸಭೆ ಅಧ್ಯಕ್ಷೆ ಸುಮಿತ್ರಾ ಆನಂದ್, ಉಪಾಧ್ಯಕ್ಷ ರೈಲ್ವೇಸ್ಟೇಷನ್ ಎಂ. ಮಲ್ಲೇಶ್ ಹಾಗೂ ದರ್ಗಾಜೋಗಿಹಳ್ಳಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಶೋಭಾ ಬಾಯಿ ಪ್ರಕಾಶ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಮಾತನಾಡಿದ ಕನ್ನಡ ಪಕ್ಷದ ರಾಜ್ಯ ಸಮಿತಿ ಸದಸ್ಯ ಸಂಜೀವ್‌ನಾಯಕ್, ಕನ್ನಡ ಹೆಸರಿನಲ್ಲಿ ರಾಜಕಾರಣ ಇಂದಿನ ಅನಿವಾರ್ಯವಾಗಿದ್ದು, ಜನಪ್ರತಿನಿಧಿಗಳು ಕನ್ನಡಿಗರ ದನಿಯಾಗಬೇಕು. ಆಗ ಮಾತ್ರ ಸ್ಥಳೀಯ ಜನರ ಆಶೋತ್ತರಗಳು ಈಡೇರುತ್ತವೆ ಎಂದರು. ಕರವೇ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜಘಟ್ಟ ರವಿ, ತಾಲೂಕು ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಸು.ನರಸಿಂಹ ಮೂರ್ತಿ, ಕನ್ನಡ ಪಕ್ಷ ರಾಜ್ಯ ಸಮಿತಿ ಸದಸ್ಯರಾದ ಸಂಜೀವ್ ನಾಯಕ್, ಡಿ.ಪಿ.ಆಂಜನೇಯ, ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಮತ್ತಿತರರಿದ್ದರು.

ಮೋದಿ ಆಡಳಿತದ ಕಾಲದಲ್ಲಿ ನಾವು ಇರುವುದೇ ಸೌಭಾಗ್ಯ: ಬೊಮ್ಮಾಯಿ

ರಾಜ್ಯ ಬಿಜೆಪಿ ಕಚೇರಿಯಲ್ಲಿ ಮೋದಿ ಕುರಿತ ಪವರ್‌ವಿಥಿನ್ ಪುಸ್ತಕ ಲೋಕಾರ್ಪಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರ ಜೀವನ ಪೂರ್ವ-ಪಶ್ಚಿಮದ ತತ್ವಜ್ಞಾನದ ಸಂಗಮವಾಗಿದೆ. ಮೋದಿ ಆಡಳಿತದ ಕಾಲದಲ್ಲಿ ನಾವೆಲ್ಲಾ ಇರುವುದು ನಮ್ಮ ಸೌಭಾಗ್ಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ರಾಜ್ಯ ಬಿಜೆಪಿ ಕಚೇರಿಯಲ್ಲಿ ಮಂಗಳವಾರ ರಾಜ್ಯ ಬಿಜೆಪಿ ಆರ್ಥಿಕ ಪ್ರಕೋಷ್ಠ ಏರ್ಪಡಿಸಿದ್ದ ಕೇಂದ್ರದ ಮಾನವ ಸಂಪನ್ಮೂಲ ಸಾಮರ್ಥ್ಯ ನಿರ್ಮಾಣ ಆಯೋಗದ ಸದಸ್ಯ ಆರ್.ಬಾಲಸುಬ್ರಹ್ಮಣ್ಯಂ ಅವರು ಪ್ರಧಾನಿ ನರೇಂದ್ರ ಮೋದಿ ನಾಯಕತ್ವ ಕುರಿತು ಬರೆದಿರುವ 'ಪವರ್ ವಿಥಿನ್' ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗುವ ವ್ಯಕ್ತಿ ಮನದಾಳದಲ್ಲಿ ಅವರ ಬಗ್ಗೆ ವಿಶೇಷ ಭಾವನೆ ಇಟ್ಟುಕೊಳ್ಳಲೇಬೇಕು ಎಂದರು.

ರಾಜ್ಯ ಬಿಜೆಪಿ ಕಚೇರಿಯಲ್ಲಿ ಆರ್.ಬಾಲಸುಬ್ರಹ್ಮಣ್ಯಂ ಅವರು ಪ್ರಧಾನಿ ನರೇಂದ್ರ ಮೋದಿ ನಾಯಕತ್ವ ಕುರಿತು ಬರೆದಿರುವ 'ಪವರ್‌ವಿಥಿನ್' ಪುಸ್ತಕವನ್ನು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಬಿಡುಗಡೆಗೊಳಿಸಿದರು.

ಯಾವುದೇ ವ್ಯಕ್ತಿ ಒಂದು ತೀರ್ಮಾನ ಮಾಡಲು ಎರಡು ಬಾರಿ ಮಾಡುತ್ತಾರೆ. ಮೊದಲು ತೀರ್ಮಾನ ಮಾಡಬೇಕೆಂದು ಮಾಡುತ್ತಾರೆ. ಮತ್ತೊಂದು ವಾಸ್ತವವಾಗಿ ಮಾಡುತ್ತಾರೆ. ಮೋದಿ ಅವರು ಮಾನವೀಯಗುಣ ಹಾಗೂ ಸೂಕ್ಷ್ಮ ಮನಸಿನವರಾಗಿದ್ದಾರೆ ಎಂದು ಶ್ಲಾಘಿಸಿದರು.

ಪ್ರಧಾನಿಯವರು ಈ ದೇಶ ಸೇವೆ ಮಾಡಲು ದೇವರೇ ನನ್ನನ್ನು ಕಳುಹಿಸಿದ್ದಾನೆ ಎಂದು ಹೇಳಿದ್ದನ್ನು ವಿರೋಧ ಪಕ್ಷದವರು ಲೇವಡಿ ಮಾಡಿದರು. ಆದರೆ, ಮೋದಿಯವರು ತಮ್ಮ ಜೀವನದಉದ್ದೇಶಅರ್ಥಮಾಡಿಕೊಂಡಿದ್ದಾರೆ. ಮೋದಿಯವರು ಬಹಳ ಗಂಭೀರವಾಗಿ ಇರುತ್ತಾರೆ ಎನ್ನುತ್ತಾರೆ. ಆದರೆ, ಅವರನ್ನು ಹತ್ತಿರದಿಂದ ನೋಡಿದವರಿಗೆ ಅವರು ಬಹಳ ತಮಾಷೆಯಾಗಿ ಇರುತ್ತಾರೆ. ಅವರ ಜೀವನ ಪ್ರಯಾಣ ಬಹಳ ಅದ್ಭುತವಾಗಿದೆ ಎಂದು ಹೇಳಿದರು.

ಲೇಖಕ ಆರ್. ಬಾಲಸುಬ್ರಹ್ಮಣ್ಯಂ, ರಾಜ್ಯ ಬಿಜೆಪಿ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್, ದತ್ತಾತ್ರೇಯ, ಜಿ.ಎಸ್.ಪ್ರಶಾಂತ್ ಉಪಸ್ಥಿತರಿದ್ದರು.

ಪಿಇಎಸ್ ವಿವಿ ಪ್ರಥಮ ವರ್ಷ ಎಂಬಿಎ ತರಗತಿ ಉದ್ಘಾಟನೆ

ಪಿಇಎಸ್ ವಿವಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿ ಗಣ್ಯರು.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಪಿಇಎಸ್ ವಿಶ್ವವಿದ್ಯಾಲಯದ 2024-25ನೇ ಸಾಲಿನ ಪ್ರಥಮ ವರ್ಷದ ಎಂಬಿಎ, ಎಂಸಿಎ ವಿದ್ಯಾರ್ಥಿಗಳ ಸ್ವಾಗತ ಮತ್ತು ತರಗತಿ ಉದ್ಘಾಟನಾ ಕಾರ್ಯಕ್ರಮವು ಇತ್ತೀಚೆಗೆ ವಿವಿಯ ಕ್ಯಾಂಪಸ್‌ನಲ್ಲಿ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪಿಇಎಸ್ ವಿವಿಯ ಸಮಕುಲಾಧಿಪತಿ ಪ್ರೊ. ಜವಾಹರ ದೊರೆಸ್ವಾಮಿ ಮಾತನಾಡಿ, ನಮ್ಮ ವಿಶ್ವವಿದ್ಯಾಲಯ ವಿದ್ಯಾರ್ಥಿಗಳಲ್ಲಿ ಸುಪ್ತವಾಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಿ ಸಾಧನೆಗೆ ಅವಕಾಶ ಮಾಡಿಕೊಡುತ್ತಿದೆ. ಆವಿಷ್ಕಾರ ಕ್ಷೇತ್ರಗಳಲ್ಲಿ ನಮ್ಮ ವಿದ್ಯಾರ್ಥಿಗಳನ್ನು ಭವಿಷ್ಯದ ನಾಯಕರಾಗಿ ನೀಡುವ ಪ್ರಯತ್ನ ನಮ್ಮದು. ಕೇವಲ ಶೈಕ್ಷಣಿಕ, ವೃತ್ತಿ ಜೀವನ ಮಾತ್ರವಲ್ಲ ವಿದ್ಯಾರ್ಥಿಗಳು ತಮ್ಮ ವೈಯಕ್ತಿಕ ಜೀವನದಲ್ಲೂ ಪರಿಪೂರ್ಣ ವ್ಯಕ್ತಿಗಳಾಗಲು ಪೂರಕವಾದ ಮೌಲ್ಯಯುತ ಶಿಕ್ಷಣ, ಪರಿಶ್ರಮದ ದಾರಿಯನ್ನು ಕಲಿಸುತ್ತಿದೆ ಎಂದರು.

ವಿವಿಯ ಹಳೆಯ ವಿದ್ಯಾರ್ಥಿಯೂ ಆದ ಉದ್ಯಮಿ ರೈ ನಿತಿನ್ ಚಿತ್ರಾಂಶ್ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪಿಇಎಸ್ ಕುಲಪತಿ ಡಾ.ಜೆ.ಸೂರ್ಯಪ್ರಸಾದ್, ಪ್ರೊ. ಅಜೋಯ್ ಕುಮಾರ್, ಕುಲಸಚಿವ ಡಾ। ಕೆ.ಎಸ್.ಶ್ರೀಧರ್ ಮತ್ತಿತರರಿದ್ದರು.

ಗ್ರಾ.ಪಂ. ಸದಸ್ಯರು, ನೌಕರರ ಬೇಡಿಕೆ ಬಗ್ಗೆ ತಜ್ಞರ ತಂಡ ರಚಿಸಿ: ಗೂಳಿಗೌಡ

ಮುಷ್ಕರದಿಂದ ಸೇವಾ ವ್ಯತ್ಯಯ: ಸಿಎಂ, ಪ್ರಿಯಾಂಕ್‌ಗೆ ಪತ್ರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮುಷ್ಕರ ನಿರತ ಗ್ರಾಮ ಪಂಚಾಯಿತಿ ಸದಸ್ಯರು, ಅಧಿಕಾರಿಗಳು ಮತ್ತು ನೌಕರರ ಬೇಡಿಕೆಗಳನ್ನು ಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಲು ತಜ್ಞರ ತಂಡ ರಚಿಸುವಂತೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗ್ರಾಮೀಣಾಭಿವೃದ್ಧಿಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಪತ್ರ ಬರೆದಿರುವ ಅವರು, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯಿಂದ ಹಿಡಿದು ಸ್ವಚ್ಛತಾ ಸಿಬ್ಬಂದಿವರೆಗೆ ಎಲ್ಲರೂ ಧರಣಿಗೆ ಇಳಿದಿರುವುದರಿಂದ ಗ್ರಾಮೀಣ ಭಾಗಗಳಲ್ಲಿ ಸಾರ್ವಜನಿಕರ ಸೇವೆ ಸಂಪೂರ್ಣ ವ್ಯತ್ಯಯವಾಗಿದೆ. ಹೀಗಾಗಿ ಸರ್ಕಾರ ಈ ಬಗ್ಗೆ ತುರ್ತಾಗಿ ಗಮನ ಹರಿಸಬೇಕು. ಪ್ರತಿಭಟನಾಕಾರರ ಬೇಡಿಕೆ ಪರಿಶೀಲನೆಗೆ ತಜ್ಞರ ತಂಡ ರಚಿಸಬೇಕು ಎಂದು ಒತ್ತಾಯಿಸಿದ್ದಾರೆ.

ಗ್ರಾ.ಪಂ.ಗಳು ಗ್ರಾಮ ಸರ್ಕಾರಗಳಂತೆ ಕಾರ್ಯನಿರ್ವಹಿಸುವತ್ತ ಹೆಜ್ಜೆ ಇಡುತ್ತಿವೆ. ಜನನ-ಮರಣ ಪ್ರಮಾಣ ಪತ್ರದಿಂದ ಹಿಡಿದು ಮೂಲ ಸೌಕರ್ಯಗಳು, ವಸತಿ ಯೋಜನೆಗಳ ಅನುಷ್ಠಾನದ ವರೆಗೆ ಒಟ್ಟು 29 ವಿಷಯಗಳಲ್ಲಿ ಗ್ರಾಪಂಗಳು ಸಾರ್ವಜನಿಕರಿಗೆ ಸೇವೆ ನೀಡುತ್ತಿವೆ. ಆದರೆ, ಗ್ರಾಪಂ ಸದಸ್ಯರು, ಅಧಿಕಾರಗಳು ಮತ್ತು ನೌಕರರು ಕಳೆದ ನಾಲ್ಕು ದಿನಗಳಿಂದ ಮುಷ್ಕರ ನಡೆಸುತ್ತಿರುವುದು ಗ್ರಾಮೀಣ ಭಾಗದಲ್ಲಿ ಆಡಳಿತ ವ್ಯವಸ್ಥೆ ತಟಸ್ಥಗೊಳ್ಳುವಂತಾಗಿದೆ.

ಹಾಗಾಗಿ ಆರ್‌ಡಿಪಿಆರ್ ಕುಟುಂಬದ ವಿವಿಧ ಸಂಘಟನೆಗಳ ಮುಖ್ಯಸ್ಥರನ್ನು ಸಾಧ್ಯವಾದಷ್ಟು ಶೀಘ್ರವಾಗಿ ಆಹ್ವಾನಿಸಿ ಸಭೆ ನಡೆಸಿ ಅವರ ಬೇಡಿಕೆಗಳನ್ನು ಪರಿಶೀಲನೆ ನಡೆಸಬೇಕು ಎಂದು ಮನವಿ ಮಾಡಿದ್ದಾರೆ.

ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರನ್ನು ರಾಜ್ಯ ಶಿಷ್ಟಾಚಾರ ವ್ಯಾಪ್ತಿಗೆ ತರಬೇಕು. ಸದಸ್ಯರ ಸಭಾ ಭತ್ಯೆಯನ್ನು ಕನಿಷ್ಠ ₹1 ಸಾವಿರಕ್ಕೆ ಏರಿಸಬೇಕು. ಅಧ್ಯಕ್ಷರಿಗೆ ₹15 ಸಾವಿರ, ಉಪಾಧ್ಯಕ್ಷರಿಗೆ ₹12 ಸಾವಿರ ಹಾಗೂ ಸದಸ್ಯರಿಗೆ ₹10 ಸಾವಿರ ಮಾಸಿಕ ಗೌರವಧನ ನಿಗದಿ ಮಾಡಬೇಕು. ಆರೋಗ್ಯ ವಿಮೆ, ಉಚಿತ ಬಸ್ ಪಾಸ್ ಮುಂತಾದವನ್ನು ಒದಗಿಸಬೇಕು ಎಂದು ಮನವಿ ಮಾಡುತ್ತಿದ್ದಾರೆ. ಅದೇ ರೀತಿ ಅಧಿಕಾರಿಗಳು, ನೌಕರರು ವಿವಿಧ ಬೇಡಿಕೆಗಳನ್ನು ಇಟ್ಟಿದ್ದಾರೆ. ಅವರ ಬೇಡಿಕೆ ಪರಿಶೀಲಿಸುವುದು ಸರ್ಕಾರದ ಕರ್ತವ್ಯ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕಾಂತರಾಜು ಆಯೋಗದ ಜಾತಿ ಗಣತಿ ವರದಿಗೆ ಒಕ್ಕಲಿಗರ ವಿರೋಧ

ಕ್ಯಾಬಿನೆಟ್‌ನಲ್ಲಿ ವರದಿಗೆ ವಿರೋಧ ವ್ಯಕ್ತಪಡಿಸಿ: ಮುನಿರಾಜು

• **ಕನ್ನಡಪ್ರಭ ವಾರ್ತೆ** ಪೀಣ್ಯ ದಾಸರಹಳ್ಳಿ

ಕಾಂತರಾಜು ಆಯೋಗ ಸುಮಾರು 10 ವರ್ಷಗಳ ಹಿಂದೆ ಸಿದ್ಧಪಡಿಸಿದ ಜಾತಿಗಣತಿ ವರದಿಯನ್ನು ಅಂದೇ ಮಂಡಿಸಬೇಕಾಗಿತ್ತು. ಆದರೆ ಇಂದು ರಾಜಕೀಯ ದುರುದ್ದೇಶದಿಂದ ಚರ್ಚೆಗೂ ಅವಕಾಶ ಕೊಡದೆ, ಘನ ಸರ್ಕಾರ ತರಾತುರಿಯಲ್ಲಿ ಕ್ಯಾಬಿನೆಟ್‌ನಲ್ಲಿ ಒಪ್ಪಿಗೆ ಪಡೆಯಲು ಮುಂದಾಗಿರುವುದು ಒಕ್ಕಲಿಗರ ಸಮುದಾಯವು ಸೇರಿದಂತೆ ಕೆಲವು ಸಮುದಾಯಗಳಿಗೆ ಘೋರ ಅನ್ಯಾಯ ಮಾಡುತ್ತಿದೆ. ಆದ್ದರಿಂದ ಕ್ಯಾಬಿನೆಟ್‌ನಲ್ಲಿ ಒಕ್ಕಲಿಗ ಸಮುದಾಯದ ಮಂತ್ರಿಗಳು ಜಾತಿಗಣತಿ ವರದಿಗೆ ವಿರೋಧ ವ್ಯಕ್ತಪಡಿಸಬೇಕು ಎಂದು ದಾಸರಹಳ್ಳಿ ವಿಧಾನಸಭಾ ಶಾಸಕ ಎಸ್.ಮುನಿರಾಜು ಒತ್ತಾಯಿಸಿದ್ದಾರೆ.

ಟಿ.ದಾಸರಹಳ್ಳಿಯಲ್ಲಿ ಒಕ್ಕಲಿಗರ ಕ್ರಿಯಾ ಸಮಿತಿ ಏರ್ಪಡಿಸಿದ್ದ ಜಾತಿಗಣತಿ ಅಂಗೀಕಾರ ವಿರುದ್ಧದ ಸಮಲೋಚನಾ ಸಭೆಯಲ್ಲಿ ಶಾಸಕರು ಮಾತನಾಡಿ, ಅಂದಿನ ಜನಸಂಖ್ಯೆಗೂ ಇಂದಿನ ಜನಸಂಖ್ಯೆಗೂ ಬಹಳ ವ್ಯತ್ಯಾಸವಿದ್ದು, ವರದಿ ಅಂಗೀಕಾರದ ಚಿಂತನೆಯೇ ಮೂರ್ಖತನವಾಗಿದೆ ಎಂದರು.

ಸಮಲೋಚನಾ ಸಭೆಯ ನಂತರ ಮಾತನಾಡಿದ ಒಕ್ಕಲಿಗರ ಕ್ರಿಯಾ ಸಮಿತಿ ಅಧ್ಯಕ್ಷ ಕೆ.ಜಿ.ಕುಮಾರ್, ಸುಪ್ರೀಂ ಕೋರ್ಟ್ ಗೈಡ್‌ಲೈನ್‌ನಂತೆ ಹತ್ತು ವರ್ಷಕ್ಕೆ ಒಮ್ಮೆ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಮಾಡಬೇಕಾಗಿದೆ. ಕಾಂತರಾಜ್ ಆಯೋಗ ವರದಿಯ ಕಾಲಾವಧಿ ಮುಗಿದಿದೆ. ಆ ಸಂಬಂಧ ಕ್ಯಾಬಿನೆಟ್‌ನಲ್ಲಿ ಸಮುದಾಯದ ಮಂತ್ರಿಗಳು ಒಪ್ಪಿಗೆ ನೀಡಬಾರದು ಮತ್ತು ಹೊಸ ಸಮೀಕ್ಷೆಗೆ ಆಗ್ರಹಿಸುತ್ತೇವೆ ಎಂದು ಹೇಳಿದರು.ಸಮಾಲೋಚನೆ ಸಭೆಯಲ್ಲಿ ಒಕ್ಕಲಿಗ ಸಮುದಾಯದ ಹಿರಿಯ ಮುಖಂಡರಾದ ಲಗ್ಗೆರೆ ಅಂಧಾನಪ್ಪ, ಕೆ.ಸಿ.ಶಿವರಾಮ್, ಎ.ಎಸ್.ಗೋವಿಂದೇಗೌಡ, ಕೆನಾಲಿಗೌಡ್ರು, ಡಾ। ಮಧುಸೂದನ್, ಗೋವಿಂದರಾಜು ಪಟೇಲ್, ನಂದನ್ ಗೌಡ, ದೇವರಾಜ್ ಗೌಡ, ಜಗದೀಶ್ ಗೌಡ, ಯೋಗಿಶ್, ರಾಣಿ ಪ್ರತಾಪ್, ಯಶೋಧಮ್ಮ, ಟಿ.ವೆಂಕಟೇಶ, ಲಕ್ಷ್ಮಣ್‌ಗೌಡ, ಭರತ್ ಮತ್ತಿತರರು ಇದ್ದರು.

ನಗರದ ಕೆ.ಜಿ. ರಸ್ತೆಯಲ್ಲಿ ಬ್ಯಾಂಕ್ ಆಫ್ ಇಂಡಿಯಾ (ಬಿಒಐ) ವತಿಯಿಂದ ಆಯೋಜಿಸಿದ್ದ 'ಜಾಗೃತಿ ಅರಿವು ಸಪ್ತಾಹ' ಕಾರ್ಯಕ್ರಮದಲ್ಲಿ ಭ್ರಷ್ಟಾಚಾರ, ಆನ್‌ಲೈನ್ ವಂಚನೆ ತಡೆ ಕುರಿತು ಮಾನವ ಸರಪಳಿ ಚಟುವಟಿಕೆ ಮೂಲಕ ಜಾಗೃತಿ ಮೂಡಿಸಲಾಯಿತು. ಬಿಒಐ ವಲಯ ವ್ಯವಸ್ಥಾಪಕಿ ಅನಿತಾ ಆರ್.ನಾಯರ್ ಮತ್ತು ಉಪ ವಲಯ ವ್ಯವಸ್ಥಾಪಕಿ ರೋಜಾ ರಮಣಿ ಅವರು ಚಟುವಟಿಕೆಗಳ ಕುರಿತು ಮಾರ್ಗದರ್ಶನ ನೀಡಿದರು. ಬಿಒಐ ಪದಾಧಿಕಾರಿಗಳು, ಸಿಬ್ಬಂದಿ ಇದ್ದರು.

ವಿ.ವಿ.ಪುರದ ಶ್ರೀ ಸುಬ್ರಹ್ಮಣೇಶ್ವರ ಕೋ ಆಪರೇಟಿವ್ ಬ್ಯಾಂಕ್ ಕೇಂದ್ರ ಕಚೇರಿಯ ಆವರಣದಲ್ಲಿ ಶ್ರೀ ಸುಬ್ರಹ್ಮಣ್ಯಸ್ವಾಮಿಯ ವಿಗ್ರಹ ಪ್ರತಿಷ್ಠಾಪನೆ ಮತ್ತು ಶ್ರೀ ಸುಬ್ರಹ್ಮಣ್ಯಶ್ವರ ಕೋ-ಆಪರೇಟಿವ್ ಬ್ಯಾಂಕ್‌ನ 50ನೇ ವರ್ಷದ ಸುವರ್ಣ ಮಹೋತ್ಸವದ ನಾಮಫಲಕ ಅನಾವರಣಗೊಳಿಸಲಾಯಿತು. ಚಿಕ್ಕಪೇಟೆ ಶಾಸಕ ಉದಯ್ ಗರುಡಾಚಾರ್, ಬ್ಯಾಂಕ್ ಅಧ್ಯಕ್ಷ ಡಾ.ಕೆ.ಎಂ.ರಂಗಧಾಮಶೆಟ್ಟಿ, ಉಪಾಧ್ಯಕ್ಷ ಡಿ.ಆರ್.ವಿಜಯಸಾರಥಿ ಇದ್ದರು.

ಮಾಗಡಿ ರಸ್ತೆಯಲ್ಲಿರುವ ಅರ್ಥಾ ಕಾರ್ಸ್ ಶೋರೂಂನಲ್ಲಿ ಕಾಂತಾರ ಖ್ಯಾತಿಯ ಚಿತ್ರನಟಿ ಸಪ್ತಮಿ ಗೌಡ ಅವರು ಎಂಜಿ ಮೋಟಾರ್ಸ್‌ನ ನೂತನ ವಿದ್ಯುತ್ ಚಾಲಿತ ವಿಂಡ್ಸರ್ ಕಾರು ಅನಾವರಣಗೊಳಿಸಿದರು. ಅರ್ಥಾ ಕಾರ್ಸ್ ಸಂಸ್ಥೆಯ ನಿರ್ದೇಶಕಿ ನಿಖಿತಾ ಪರಮೇಶ್, ಎಂಜಿ ದಕ್ಷಿಣ ವಲಯದ ಡೀಲರ್ ಡೆವಲಪ್‌ಮೆಂಟ್ ವಿಭಾಗದ ಮುಖ್ಯಸ್ಥ ನೂಪುರ್ ಜೈನ್, ಅರ್ಥಾ ಕಾರ್ಸ್‌ಸಿಇಓ ಭೀಜೈನ್, ಮಾನವ ಸಂಪನ್ಮೂಲ ಅಧಿಕಾರಿ ನಾಗಶ್ರೀ ಇದ್ದರು.

ರಸ್ತೆ ಅಭಿವೃದ್ಧಿಗೆ ಹಣ ಕೊಡಿ: ವಿಶ್ವನಾಥ್

• **ಕನ್ನಡಪ್ರಭ ವಾರ್ತೆ** ಯಲಹಂಕ

ರಾಜ್ಯ ಸರ್ಕಾರ ಬೆಂಗಳೂರು ಅಭಿವೃದ್ಧಿಗೆ ಅನುದಾನ ನೀಡದಿದ್ದರೆ, ಬಂಡವಾಳ ಹೂಡಿಕೆದಾರರು ನಗರದಿಂದ ದೂರ ಸರಿಯುತ್ತಾರೆ, ಇದನ್ನು ಮನಗಂಡು ರಾಜ್ಯ ಸರ್ಕಾರ ರಸ್ತೆ ಅಭಿವೃದ್ಧಿಗಾದರೂ ಹಣ ನೀಡಿ ಸಹಕರಿಸಬೇಕು ಎಂದು ಶಾಸಕ ಎಸ್.ಆರ್. ವಿಶ್ವನಾಥ್ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು.

ಅದ್ದಿಗಾನಹಳ್ಳಿ ಗ್ರಾಮದಲ್ಲಿ ಶಾಸಕರ ವಿಶೇಷ ಅನುದಾನದ ಅಡಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದರು. ಇತ್ತೀಚೆಗೆ ರಾಜ್ಯ ಸರ್ಕಾರ ಬೆಂಗಳೂರಿನ ರಸ್ತೆ ಗುಂಡಿ ಮುಚ್ಚಲು ಒಂದಷ್ಟು ಅನುದಾನ ನೀಡಿತ್ತು. ಆದರೆ ಮಳೆಯಿಂದಾಗಿ ಗುಂಡಿಗಳು ಮತ್ತದೇ ಹಳೆಯ ಸ್ಥಿತಿ ತಲುಪಿವೆ ಎಂದರು.



ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಿಗೆ ಬಿಜೆಪಿ ಶಾಸಕನಿಂದ ನೇಮಕ ಪತ್ರ

ಯಶವಂತಪುರದ ವಿವಿಧ ಬ್ಲಾಕ್‌ಗೆ ಅಧ್ಯಕ್ಷರ ನೇಮಕ | ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ಅವರಿಂದ ಅಭಿನಂದನೆ

• **ಕನ್ನಡಪ್ರಭ ವಾರ್ತೆ** ಕೆಂಗೇರಿ

ಯಶವಂತಪುರ ವಿಧಾನಸಭಾ ಕ್ಷೇತ್ರದ ಹೇರೋಹಳ್ಳಿ, ಕಗ್ಗಲೀಪುರ, ತಾವರೆಕೆರೆ ಮತ್ತು ಕೆಂಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರನ್ನು ನೇಮಕ ಮಾಡಿ ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆದೇಶ ಮಾಡಿದ್ದಾರೆ.

ಹೇರೋಹಳ್ಳಿ ಬ್ಲಾಕ್ ಕಾಂಗ್ರೆಸ್‌ಗೆ ಎಚ್. ಶ್ರೀಧರ್, ಕಗ್ಗಲಿಪುರ ಬ್ಲಾಕ್ ಕಾಂಗ್ರೆಸ್‌ಗೆ ಎಂ.ಚಿಕ್ಕರಾಜು, ತಾವರೆಕೆರೆ ಬ್ಲಾಕ್ ಕಾಂಗ್ರೆಸ್‌ಗೆ ಆರ್.ರೇವಣಸಿದ್ದೇಗೌಡ ಹಾಗೂ ಕೆಂಗೇರಿ ಬ್ಲಾಕ್ ಕಾಂಗ್ರೆಸ್‌ಗೆ ಎನ್. ನಾಗರಾಜ್ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಎಲ್ಲಾ ನೂತನ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷರಿಗೆ ಸ್ಥಳೀಯ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ಕ್ಷೇತ್ರದಲ್ಲಿ ನೇಮಕಾತಿ ಪತ್ರ ನೀಡಿ ಶುಭ ಕೋರಿದ್ದು ವಿಶೇಷವಾಗಿತ್ತು.

ಹೇರೋಹಳ್ಳಿ, ಕಗ್ಗಲಿಪುರ, ತಾವರೆಕೆರೆ, ಕೆಂಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ನೇಮಕಗೊಂಡಿರುವ ಎಚ್.ಶ್ರೀಧರ್, ಎಂ.ಚಿಕ್ಕರಾಜು, ರ